ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 457(542) |
| ಸದಸ್ಯರ ಹೆಸರು | ಶ್ರೀ ಶಶೀಲ್.ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 12/12/2024 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಲೋಕಸೇವಾ ಆಯೋಗಕ್ಕೆ ಸರ್ಕಾರದಿಂದ ಮಂಜೂರಾದ ಭರ್ತಿಯಾದ ಹಾಗೂ ಖಾಲಿಯಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು: (ಹುದ್ದೆಗಳಿಗನುಸಾರವಾಗಿ ವಿವರ ನೀಡುವುದು) | ಕರ್ನಾಟಕ ಲೋಕಸೇವಾ ಆಯೋಗಕ್ಕೆ ಮಂಜೂರಾಗಿರುವ 380 ಹುದ್ದೆಗಳಲ್ಲಿ ಖಾಯಂ/ಗುತ್ತಿಗೆ/ ಹೊರಗುತ್ತಿಗೆ ಎಲ್ಲಾ ವೃಂದದ ಹುದ್ದೆಗಳನ್ನು ಸೇರಿಸಿ ಒಟ್ಟು 257 ಹುದ್ದೆಗಳು ಭರ್ತಿಯಾಗಿರುತ್ತವೆ ಹಾಗೂ ವಿವಿಧ ವೃಂದದ 123 ಹುದ್ದೆಗಳು ಖಾಲಿ ಇರುತ್ತದೆ. ಹುದ್ದೆಗಳ ಮಾಹಿತಿಯನ್ನು ಅನುಬಂಧದಲ್ಲಿ ನೀಡಿದೆ. |
| ಆ) | ಪ್ರಸ್ತುತ ಆಯೋಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆಯಾಧಾರಿತ ಮತ್ತು ಖಾಯಂ ಸಿಬ್ಬಂದಿಗಳ ಸಂಖ್ಯೆ ಎಷ್ಟು: | ಪ್ರಸ್ತುತ ಆಯೋಗದಲ್ಲಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ 92 ಸಿಬ್ಬಂದಿಗಳು ಮತ್ತು 165 ಖಾಯಂ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ. |
| ಇ) | ಆಯೋಗದಲ್ಲಿನ ಸಿಬ್ಬಂದಿಗಳ ತೀವ್ರ ಕೊರತೆಯಿಂದಾಗಿ ರಾಜ್ಯ ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಪರೀಕ್ಷೆಗಳ ಮೌಲ್ಯಮಾಪನ ಸೇರಿದಂತೆ ಎಲ್ಲ ನೇಮಕಾತಿ ಪ್ರಕ್ರಿಯೆಗಳು ತೀವ್ರ ವಿಳಂಬಗತಿಯಲ್ಲಿ ಫಲಿತಾಂಶಗಳನ್ನು ಪ್ರಕಟಿಸುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಆಯೋಗದಲ್ಲಿನ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು: | ಆಯೋಗದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರದಿಂದ ಈ ಕೆಳಕಂಡಂತೆ ಕ್ರಮವಹಿಸಿದೆ.<br>1. ದಿನಾಂಕ: 15-11-2022 ರಂದು ಆಯೋಗದಲ್ಲಿ ವಿವಿಧ ವರ್ಗಗಳ 34 ಹುದ್ದೆಗಳನ್ನು ಹೊಸದಾಗಿ ಸೃಜಿಸಿದೆ. ಇದಲ್ಲದೇ, 21 ಹುದ್ದೆಗಳನ್ನು ಗುತ್ತಿಗೆ/ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಸೃಜಿಸಲಾಗಿದೆ.<br>2. 18 ಸಹಾಯಕರು ಮತ್ತು 13 ಕಿರಿಯ ಸಹಾಯಕರನ್ನು ಭರ್ತಿ ಮಾಡಿಕೊಳ್ಳಲು ಸಹಮತಿ ನೀಡಲಾಗಿರುತ್ತದೆ.<br>3. 2 ದತ್ತಾಂಶ ನಮೂದು ಸಹಾಯಕರ ಹುದ್ದೆಗೆ ನೇಮಕಾತಿ ಆದೇಶ ನೀಡಲು ಅನುಮೋದಿಸಿದೆ.<br>4. ಆಯೋಗದ ಗಣಕಕೇಂದ್ರದಲ್ಲಿ 17 ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಆಯೋಗದ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಮಾಡಲು |
| ಈ) | ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಹುದ್ದೆಗಳನ್ನು ನೇಮಕಾತಿ ಮಾಡುವ "ಉದ್ಯೋಗ ಸೌಧ" ಎನಿಸಿರುವ ಕರ್ನಾಟಕ ಲೋಕಸೇವಾ ಆಯೋಗದಲ್ಲೇ ಸಿಬ್ಬಂದಿಗಳ ಕೊರತೆಯಿರುವುದರಿಂದ ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರಗತಿಯಲ್ಲಿ | |

| | | |
|---|---|---|
| | ಪೂರ್ಣಗೊಳಿಸಲು ಸಾಧ್ಯವೇ: ಈ ಕುರಿತು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳಾವುವು? (ವಿವರವಾದ ಮಾಹಿತಿಯನ್ನು ಒದಗಿಸುವುದು) | ಪರಿಶೀಲನೆಯಲ್ಲಿದೆ.<br><br>ವಿವಿಧ ನೇಮಕಾತಿ ಪ್ರಾಧಿಕಾರಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನ್ಯೂನತೆಗಳಿದ್ದಲ್ಲಿ ಅವುಗಳ ಬಗ್ಗೆ ಸ್ಪಷ್ಟೀಕರಣ/ ಅಗತ್ಯ ಮಾಹಿತಿ ಹಾಗೂ ದಾಖಲೆಗಳನ್ನು ಆಯೋಗವು ಕೋರಿದ ಸಂದರ್ಭದಲ್ಲಿ ಅವುಗಳನ್ನು ನೀಡಲು ನೇಮಕಾತಿ ಪ್ರಾಧಿಕಾರಗಳು ಕಾಲಾವಕಾಶ ತೆಗೆದುಕೊಳ್ಳುತ್ತಿರುವುದು ಹಾಗೂ ಆಯ್ಕೆಗೊಂಡ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನಾ ಕಾರ್ಯಕ್ಕೆ ಹಾಜರಾಗುವ ಅಭ್ಯರ್ಥಿಗಳು ಕೆಲವು ಸಂದರ್ಭಗಳಲ್ಲಿ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಕಾಲಾವಕಾಶಗಳನ್ನು ತೆಗೆದುಕೊಳ್ಳುತ್ತಿದ್ದು, ನಿಗದಿತ ಸಮಯದಲ್ಲಿ ದಾಖಲೆಗಳನ್ನು ಸಲ್ಲಿಸದೇ ಇರುವುದು ಮತ್ತು ಪ್ರತಿ ನೇಮಕಾತಿ ಪ್ರಕ್ರಿಯೆಗಳಲ್ಲಿಯೂ ಅಭ್ಯರ್ಥಿಗಳು ಕಾನೂನು ಪ್ರಕರಣಗಳನ್ನು ದಾಖಲಿಸುತ್ತಿರುವುದ ರಿಂದ ಆಯೋಗದಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ನಿಗಧಿತ ಅವಧಿಯಲ್ಲಿ ನಡೆಸಲು ವಿಳಂಬವಾಗುತ್ತಿದೆ.<br><br>ಆದಾಗಿಯೂ, ನೇಮಕಾತಿ ಪ್ರಕ್ರಿಯೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ತಾತ್ಕಾಲಿಕ ವೇಳಾ ಪಟ್ಟಿಯನ್ನು ಹಾಕಿಕೊಂಡು ಗುರಿ ನಿಗಧಿಪಡಿಸಿ ಕೊಳ್ಳಲಾಗುತ್ತದೆ. ಅಲ್ಲದೇ ವಿಳಂಬವನ್ನು ತಡೆಗಟ್ಟಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಆಯೋಗದ ಅಧಿಕಾರಿ /ನೌಕರರು ನಿಗಧಿತ ಕಛೇರಿ ವೇಳೆಯ ಮುನ್ನ ಮತ್ತು ನಂತರ ಹಾಗೂ ಸಾರ್ವತ್ರಿಕ ರಜಾ ದಿನಗಳಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುತ್ತಾರೆ. |

**ಸಿಆಸುಇ 244 ಎಸ್‌ಎಲ್‌ಎ 2024**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ